ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 12 ನೇ ಮಾರ್ಚ್, 2020

ಬೆಂಗಳೂರು ನಗರ ಎದುರಿಸುತ್ತಿರುವ ತೀವ್ರವಾದ ಸಂಚಾರ ದಟ್ಟಣೆ ಸಮಸ್ಯೆ ಬಗ್ಗೆ

ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :-

719 (721) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತೀವ್ರ ಸಂಚಾರ ದಟ್ಟಣೆಯಿಂದ ಸಾರ್ವಜನಿಕರಿಗೆ ಸಮಸ್ಯೆ ತಂದೊಡ್ಡುವುದಲ್ಲದೆ, ಅವರ ಸಮಯವನ್ನು ಹಾಳು ಮಾಡುವ ವಿಶ್ವದ ಅಗ್ರ 10 ನಗರಗಳ ಪಟ್ಟಿಯಲ್ಲಿ ಬೆಂಗಳೂರು ಪ್ರಥಮ ಸ್ಥಾನದಲ್ಲಿರುವುದಾಗಿ ಇತ್ತೀಚಿನ ಸಮೀಕ್ಷೆಯೊಂದು ಹೇಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಆತಂಕಕಾರಿ ಸಮಸ್ಯೆಗೆ ಕಾರಣಗಳೇನು ;

(ಇ) ಬೆಂಗಳೂರು ಎದುರಿಸುತ್ತಿರುವ ತೀವ್ರವಾದ ಈ ಸಂಚಾರ ದಟ್ಟಣೆ ಸಮಸ್ಯೆ ಪರಿಹಾರಕ್ಕಾಗಿ ಸರ್ಕಾರ ಕೈಗೊಂಡಿರುವ ಅಥವಾ ಕೈಗೊಳ್ಳಲಾಗುವ ದೀರ್ಘಾವಧಿ ಪರಿಹಾರಗಳೇನು ?